**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ</u>**

**<u>ಸಿಸಿ ಸಂಖ್ಯೆ: 2782/2021</u>**

| | |
|---|---|
| **<u>ಪಿರ್ಯಾದಿದಾರರು:</u>** | ರಾಜ್ಯ ಪರ ಪೊಲೀಸರು,<br>ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ |
| | **ವಿರುದ್ಧ** |
| **<u>ಆರೋಪಿತ/ರು:</u>** | ಬಾಲಕೃಷ್ಣ ಕೆ.ಜಿ. ಬಿನ್ ಗೋವಿಂದೇಗೌಡ,<br>ಸುಮಾರು 42 ವರ್ಷ ವಯಸ್ಸು,<br>ವಾಸ: ಕರಿಮಾರನಹಳ್ಳಿ ಗ್ರಾಮ,<br>ಕಸಬಾ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು,<br>ಹಾಸನ ಜಿಲ್ಲೆ. |

**<u>ದೋಷಾರೋಪಣೆ</u>**

**ದೀಪು ಬಿ.ಸಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿ/ಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕ 15.08.2021 ರಂದು ಮದ್ಯಾಹ್ನ 3.30 ಗಂಟೆ ಸಮಯದಲ್ಲಿ ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ಚನ್ನರಾಯಪಟ್ಟಣ ತಾಲ್ಲೂಕು, ಕಸಬಾ ಹೋಬಳಿ, ಕರಿಮಾರನಹಳ್ಳಿ ಗ್ರಾಮದಲ್ಲಿ, ಸಾಕ್ಷಿ.1 ರವರು ಸಾಕ್ಷಿ.2 ರವರೊಂದಿಗೆ ಮನೆಯ ಬಳಿ ನಿಂತಿದ್ದಾಗ, ಆರೋಪಿಯಾದ ನೀವು ಮದ್ಯಪಾನ ಮಾಡಿಕೊಂಡು ಮನೆ ಬಳಿ ಬಂದು, ಸಾಕ್ಷಿ.1 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಬೇವರ್ಸಿ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 504** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

2) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ, ಆರೋಪಿಯಾದ ನೀವು, ನಿಮ್ಮ ಸ್ವಇಚ್ಛೆಯಿಂದ ಕೈಗಳಿಂದ ಸಾಕ್ಷಿ.1 ರವರ ಎರಡು ಭುಜಗಳಿಗೆ, ಹೊಟ್ಟೆಗೆ, ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

3) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ, ಆರೋಪಿಯಾದ ನೀವು, ಸಾಕ್ಷಿ.1 ರವರಿಗೆ ನಿನ್ನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟುಮಾಡಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

ದಿನಾಂಕಃ **17.10.2023**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆಃ 2782/2021**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತ/ರುಃ** ಬಾಲಕೃಷ್ಣ ಕೆ.ಜಿ. ಬಿನ್ ಗೋವಿಂದೇಗೌಡ,
ಸುಮಾರು 42 ವರ್ಷ ವಯಸ್ಸು,
ವಾಸಃ ಕರಿಮಾರನಹಳ್ಳಿ ಗ್ರಾಮ,
ಕಸಬಾ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು,
ಹಾಸನ ಜಿಲ್ಲೆ.

**ದೋಷಾರೋಪಣೆ**

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಉತ್ತರಃ ಅರ್ಥವಾಯಿತು

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರಃ ವಿಚಾರಣೆಯಾಗಬೇಕು

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **17.10.2023**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.